# <u>ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ. ನ್ಯಾಯಾಲಯ, ಇಂಡಿ.</u>

**OS No**.609/2018

**PW**:3

**ದಿನಾಂಕ 12.08.2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**<u>ಪಾಟೀ ಸವಾಲುಃ 4 ನೇ ಪ್ರತಿವಾದಿ ಪರ ಶ್ರೀ.ಎಸ್.ಬಿ.ಎನ್. ವಕೀಲರಿಂದ:</u>**

ನನಗೆ ಓದಲು ಬರೆಯಲು ಬರುವುದಿಲ್ಲ. ವಾದಿಯು ಶಿರಗೂರ ಗ್ರಾಮದಲ್ಲಿ ವಾಸಿಸುತ್ತಾನೆ. 1 ರಿಂದ 3 ನೇ ಪ್ರತಿವಾದಿಯರು ಸಹ ಶಿರಗೂರ ಗ್ರಾಮದಲ್ಲಿ ವಾಸಿಸುತ್ತಾರೆ. ವಾದಿ ಮತ್ತು 1 ರಿಂದ 3 ನೇ ಪ್ರತಿವಾದಿಯರು ಶಿರಗೂರ ಗ್ರಾಮದಲ್ಲಿ ವಾಸಿಸುತ್ತಾರೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಸಾಕ್ಷಾ ಪ್ರಮಾಣ ಪತ್ರಿಕೆಯಲ್ಲಿ ಏನು ಬರೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನನ್ನ ಸಾಕ್ಷ್ಯಾಪ್ರಮಾಣ ಪತ್ರಿಕೆಗೆ ಯಾರು ಮಾಹಿತಿ ಕೊಟ್ಟಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನಮ್ಮ ಆಸ್ತಿಯನ್ನು ನಾಮದೇವ ಈತನಿಗೆ ಖರೀದಿಗೆ ಕೊಟ್ಟಿರುತ್ತೇವೆ. ನಾವು ನಾಮದೇವ ಈತನಿಗೆ ಕೊಡುವಾಗ ಖರೀದಿ ಪತ್ರವನ್ನು ನೊಡಿಲ್ಲ ಆದರೆ ನಮ್ಮ ಅಜ್ಜ ಖರೀದಿಗೆ ಕೊಟ್ಟಿರುತ್ತಾರೆ ಎಂದು ನುಡಿಯುತ್ತಾರೆ. ನಮ್ಮ ಅಜ್ಜ 8 ಸಾವಿರ ರೂ.ಗಳಿಗೆ ಮಾರಾಟ ಮಾಡಿದ್ದು ಆದರೆ ದಿನಾಂಕ ಗೊತ್ತಿಲ್ಲ. ನಾನು ಮಾರಾಟ ಮಾಡುವಾಗ ಹೋಗಿಲ್ಲ. ನಾನು ಮಾರಾಟ ಮಾಡಿದ ಕಾಗದವನ್ನು ನೋಡಿಲ್ಲ. ನಮ್ಮ ಅಜ್ಜನು ಎಷ್ಟು ಎಕರೆ ಮಾರಾಟ ಮಾಡಿರುತ್ತಾರೆ ಎಂದು ನಾನು ಕಾಗದವನ್ನು ನೋಡಿಲ್ಲ. ನಮ್ಮ ಅಜ್ಜನಿಗೆ ಎಷ್ಟು ಎಕರೆ ಇತ್ತು ಎಂದು ನನಗೆ ಗೊತ್ತಿಲ್ಲ. ದಾವಾ ಆಸ್ತಿಯ ಚಕ್ಕಬಂದಿ ನನಗೆ ಹೇಳಲು ಬರುವುದಿಲ್ಲ. ನಾನು ದಾವಾ ಆಸ್ತಿಯನ್ನು ನೋಡಿಲ್ಲ. 4 ನೇ ಪ್ರತಿವಾದಿಯು 1987 ನೇ ಇಸವಿಯಲ್ಲಿ ತನ್ನ ಸ್ವಂತ ದುಡಿಮೆಯಿಂದ ದಾವಾ ಆಸ್ತಿಯನ್ನು ಖರೀದಿ ಮಾಡಿರುತ್ತಾನೆ ಎಂದರೆ ಸಾಕ್ಷಿಯು ನಾವು ನಾಮದೇವ ಈತನಿಗೆ ಮಾರಾಟ ಮಾಡಿರುತ್ತೇವೆ ಆತ ಯಾರಿಗೆ ಕೊಟ್ಟಿರುತ್ತಾನೆ ಎಂದು ನಮಗೆ ಗೊತ್ತಿಲ್ಲವೆಂದು ನುಡಿಯುತ್ತಾರೆ. 4 ನೇ ಪ್ರತಿವಾದಿಯು ದಾವಾ ಆಸ್ತಿಯನ್ನು ಖರೀದಿ ಮಾಡಿದಾಗಿನಿಂದ ಮಾಲ್ಕಿನಾತೆಯಿಂದ ಕಬ್ಜಾ ವಹಿವಾಟನ್ನು ಮಾಡುತ್ತಾನೆ ಎಂದರೆ ಸರಿಯಲ್ಲ. ವಾದಿಯು ಕಬ್ಜಾ ವಹಿವಾಟನ್ನು ಮಾಡುತ್ತಾನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿಯ ವಯಸ್ಸು ನನಗೆ ಗೊತ್ತಿಲ್ಲ. 4 ನೇ ಪ್ರತಿವಾದಿಯು ದಾವಾ ಆಸ್ತಿಯನ್ನು ಖರೀದಿ ಮಾಡುವಾಗ ವಾದಿಯು ಹುಟ್ಟಿರಲಿಲ್ಲ ಎಂದರೆ ನನಗೆ ಗೊತ್ತಿಲ್ಲ. ನನ್ನ ಸಾಕ್ಷ್ಯಾಪ್ರಮಾಣ ಪತ್ರಿಕೆಯಲ್ಲಿ ದಾವಾ ಆಸ್ತಿಯ ಸರ್ವೆ ನಂಬರ

ಮತ್ತು ವಿಸ್ತೀರ್ಣ ಏನು ಇರುತ್ತದೆ ಎಂದು ಗೊತ್ತಿಲ್ಲ. ದಾವಾ ಆಸ್ತಿಗೆ ಮತ್ತು ವಾದಿಗೆ ಯಾವುದೇ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯನ್ನು 4 ನೇ ಪ್ರತಿವಾದಿಯು ಖರೀದಿ ಮಾಡಿರುವ ವಿಷಯ ನನಗೆ ಗೊತ್ತಿದ್ದರು ಇಲ್ಲವೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲಲ.

**ಮರು ವಿಚಾರಣೆ: ಇಲ್ಲ:**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೆ. ಸರಿ ಇದೆ.

ಸಹಿ/–

ಜೆ.ಎಂ.ಎಫ್.ಸಿ. ನ್ಯಾಯಾಲಯ

ಇಂಡಿ.

## <u>ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ. ನ್ಯಾಯಾಲಯ, ಇಂಡಿ.</u>

**OS No**.609/2018

**PW**:2

**ದಿನಾಂಕ 12.08.2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**<u>ಪಾಟೀ ಸವಾಲುಃ 4 ನೇ ಪ್ರತಿವಾದಿ ಪರ ಶ್ರೀ.ಎಸ್.ಬಿ.ಎನ್. ವಕೀಲರಿಂದ:</u>**

ವಾದಿಯು ಶಿರಗೂರ ಗ್ರಾಮದಲ್ಲಿ ವಾಸಿಸುತ್ತಾನೆ. 1 ರಿಂದ 3 ನೇ ಪ್ರತಿವಾದಿಯರು ಸಹ ಶಿರಗೂರ ಗ್ರಾಮದಲ್ಲಿ ವಾಸಿಸುತ್ತಾರೆ. ವಾದಿ ಮತ್ತು 1 ರಿಂದ 3 ನೇ ಪ್ರತಿವಾದಿಯರು ಶಿರಗೂರ ಗ್ರಾಮದಲ್ಲಿ ವಾಸಿಸುತ್ತಾರೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ತವರು ಮನೆ ಶಿರನಾಳ ಇರುತ್ತದೆ. ನನ್ನ ಗಂಡನ ಮನೆ ಅಣಚಿ ಇರುತ್ತದೆ. ನಾನು ಮದುವೆಯಾದಾಗಿನಿಂದ ನನ್ನ ಗಂಡನ ಮನೆಯಲ್ಲಿ ಇರುತ್ತೇನೆ ಎಂದರೆ ಸರಿ. ನನ್ನ ತವರು ಮನೆ ಆಸ್ತಿ ಸರ್ವೆ ನಂಬರ ಹಾಗೂ ವಿಸ್ತೀರ್ಣ ನನಗೆ ಹೇಳಲು ಬರುವುದಿಲ್ಲ. ನನ್ನ ಸಾಕ್ಷಾ ಪ್ರಮಾಣ ಪತ್ರಿಕೆಯಲ್ಲಿ ಏನು ಬರೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನನ್ನ ಸಾಕ್ಷ್ಯಾ ಪ್ರಮಾಣ ಪತ್ರಿಕೆಗೆ ಯಾರು ಮಾಹಿತಿ ಕೊಟ್ಟಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನಮ್ಮ ಆಸ್ತಿಯನ್ನು ನಾಮದೇವ ಈತನಿಗೆ ಖರೀದಿಗೆ ಕೊಟ್ಟಿರುತ್ತೇವೆ. ನಾವು ನಾಮದೇವ ಈತನಿಗೆ ಕೊಡುವಾಗ ಖರೀದಿ ಪತ್ರವನ್ನು ನೊಡಿಲ್ಲ ಆದರೆ ನಮ್ಮ ಮಾವ ಖರೀದಿಗೆ ಕೊಟ್ಟಿರುತ್ತಾರೆ ಎಂದು ನುಡಿಯುತ್ತಾರೆ. ನಮ್ಮ ಮಾವ 8 ಸಾವಿರ ರೂ.ಗಳಿಗೆ ಮಾರಾಟ ಮಾಡಿದ್ದು ಆದರೆ ದಿನಾಂಕ ಗೊತ್ತಿಲ್ಲ. ನಾನು ಮಾರಾಟ ಮಾಡುವಾಗ ಹೋಗಿಲ್ಲ. ನಾನು ಮಾರಾಟ ಮಾಡಿದ ಕಾಗದವನ್ನು ನೋಡಿಲ್ಲ. ನಮ್ಮ ಮಾವನು ಎಷ್ಟು ಎಕರೆ ಮಾರಾಟ ಮಾಡಿರುತ್ತಾರೆ ಎಂದು ನಾನು ಕಾಗದವನ್ನು ನೋಡಿಲ್ಲ. ನಮ್ಮ ಮಾವನಿಗೆ ಎಷ್ಟು ಎಕರೆ ಇತ್ತು ಎಂದು ನನಗೆ ಗೊತ್ತಿಲ್ಲ. ದಾವಾ ಆಸ್ತಿಯ ಚಕ್ಕಬಂದಿ ನನಗೆ ಹೇಳಲು ಬರುವುದಿಲ್ಲ. ನಾನು ದಾವಾ ಆಸ್ತಿಯನ್ನು ನೋಡಿಲ್ಲ. 4 ನೇ ಪ್ರತಿವಾದಿಯು 1987 ನೇ ಇಸವಿಯಲ್ಲಿ ತನ್ನ ಸ್ವಂತ ದುಡಿಮೆಯಿಂದ ದಾವಾ ಆಸ್ತಿಯನ್ನು ಖರೀದಿ ಮಾಡಿರುತ್ತಾನೆ ಎಂದರೆ ಸಾಕ್ಷಿಯು ನಾವು ನಾಮದೇವ ಈತನಿಗೆ ಮಾರಾಟ ಮಾಡಿರುತ್ತೇವೆ ಆತ ಯಾರಿಗೆ ಕೊಟ್ಟಿರುತ್ತಾನೆ ಎಂದು ನಮಗೆ ಗೊತ್ತಿಲ್ಲವೆಂದು ನುಡಿಯುತ್ತಾರೆ. 4 ನೇ ಪ್ರತಿವಾದಿಯು ದಾವಾ ಆಸ್ತಿಯನ್ನು ಖರೀದಿ ಮಾಡಿದಾಗಿನಿಂದ ಮಾಲ್ಕಿನಾತೆಯಿಂದ ಕಬ್ಜಾ ವಹಿವಾಟನ್ನು ಮಾಡುತ್ತಾನೆ ಎಂದರೆ ಸರಿಯಲ್ಲ. ವಾದಿಯು ಕಬ್ಜಾ ವಹಿವಾಟನ್ನು ಮಾಡುತ್ತಾನೆ ಎಂದು ಸುಳ್ಳು ಸಾಕ್ಷಿ



ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿಯ ವಯಸ್ಸು ನನಗೆ ಗೊತ್ತಿಲ್ಲ. 4 ನೇ ಪ್ರತಿವಾದಿಯು ದಾವಾ ಆಸ್ತಿಯನ್ನು ಖರೀದಿ ಮಾಡುವಾಗ ವಾದಿಯು ಹುಟ್ಟಿರಲಿಲ್ಲ ಎಂದರೆ ನನಗೆ ಗೊತ್ತಿಲ್ಲ. ನನ್ನ

ಸಾಕ್ಷ್ಯಾ ಪ್ರಮಾಣ ಪತ್ರಿಕೆಯಲ್ಲಿ ದಾವಾ ಆಸ್ತಿಯ ಸರ್ವೆ ನಂಬರ ಮತ್ತು ವಿಸ್ತೀರ್ಣ ಏನು ಇರುತ್ತದೆ ಎಂದು ಗೊತ್ತಿಲ್ಲ. ದಾವಾ ಆಸ್ತಿಗೆ ಮತ್ತು ವಾದಿಗೆ ಯಾವುದೇ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯನ್ನು 4 ನೇ ಪ್ರತಿವಾದಿಯು ಖರೀದಿ ಮಾಡಿರುವ ವಿಷಯ ನನಗೆ ಗೊತ್ತಿದ್ದರು ಇಲ್ಲವೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲಲ.

**<u>ಮರು ವಿಚಾರಣೆ: ಇಲ್ಲ:</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೆ. ಸರಿ ಇದೆ.

ಸಹಿ/–

ಜೆ.ಎಂ.ಎಫ್.ಸಿ. ನ್ಯಾಯಾಲಯ

ಇಂಡಿ.